## ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 03 ಬಿಇಎಂ 2020 (ಭಾಗ)

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ
ಬೆಂಗಳೂರು, ದಿನಾಂಕ: 30.01.2021

## ಸುತ್ತೋಲೆ

ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ: 06.07.2020ರಲ್ಲಿ ರಾಜ್ಯದಲ್ಲಿ ಕೋವಿಡ್-19 ನಿಂದ ಉಂಟಾದ ಪರಿಸ್ಥಿತಿಯನ್ನು ನಿಭಾಯಿಸಿ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸಲು 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿತ್ತು.

ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ ದಿನಾಂಕ 6.7.2020ರ ಸುತ್ತೋಲೆಯಿಂದ ವಿನಾಯಿತಿ ನೀಡುವಂತೆ ಕೋರಿ ಹಲವಾರು ಇಲಾಖೆಗಳಿಂದ ಪ್ರಸ್ತಾವನೆಗಳನ್ನು ಸ್ವೀಕೃತಗೊಂಡ ಹಿನ್ನಲೆಯಲ್ಲಿ, ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಿ, ನೇಮಕಾತಿ ಪೂರ್ವ ಪ್ರಕ್ರಿಯೆಗಳನ್ನು ಮುಂದುವರೆಸಲು ಕೆಲವು ಇಲಾಖೆಗಳಿಗೆ ಸಹಮತಿ ನೀಡಲಾಗಿದೆ.

ಮುಂದುವರೆದು, ದಿನಾಂಕ 12-01-2021ರ ಸುತ್ತೋಲೆಯಲ್ಲಿ, ಅನುಕಂಪದ ಅಧಾರದ ಮೇಲೆ ನೇಮಕ ಗೊಂಡಿರುವ ಅಭ್ಯರ್ಥಿಗಳಿಗೆ ಕೆಲವು ಷರತ್ತುಗಳಿಗೆ ಒಳಪಟ್ಟು ನೇಮಕಾತಿ ಅದೇಶ ನೀಡಲು ಸಹಮತಿ ನೀಡಲಾಗಿದೆ.

ಇದೇ ರೀತಿ, ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ವಿವಿಧ ಇಲಾಖೆಗಳಿಗೆ ಪ್ರಥಮ ದರ್ಜೆ ಸಹಾಯಕ ಮತ್ತು ದ್ವಿತೀಯ ದರ್ಜೆ ಸಹಾಯಕ ಹುದ್ದೆಗಳಿಗೆ ಆಯ್ಕೆಯಾಗಿರುವ ಅಭ್ಯರ್ಥಿಗಳ ನೇಮಕಾತಿ ಆದೇಶ ನೀಡಲು ಅನುಮತಿ ಕೋರಿರುವ ವಿವಿದ ಇಲಾಖೆಗಳಿಂದ ಪ್ರಸ್ತಾವನೆಗಳು ಸ್ವೀಕೃತಗೊಂಡಿರುತ್ತವೆ.

ಈ ಹಿನ್ನಲೆಯಲ್ಲಿ, ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ವಿವಿಧ ಇಲಾಖೆಗಳಿಗೆ, ಪ್ರಥಮ ದರ್ಜೆ ಸಹಾಯಕ ಮತ್ತು ದ್ವಿತೀಯ ದರ್ಜೆ ಸಹಾಯಕ ಹುದ್ದೆಗಳಿಗೆ ಆಯ್ಕೆಯಾಗಿರುವ ಅಭ್ಯರ್ಥಿಗಳ ನೇಮಕಾತಿ ಪೂರ್ವ ಪ್ರಕ್ರಿಯೆಗಳನ್ನು ಮುಂದುವರೆಸಲು ಸಹಮತಿ ನೀಡಿದೆ. ಮುಂದುವರೆದು, ನೇಮಕಾತಿ ಪೂರ್ವ ಪ್ರಕ್ರಿಯೆಗಳನ್ನು ಮುಕ್ತಾಯಗೊಂಡ ನಂತರ, ಆರ್ಥಿಕ ಇಲಾಖೆಯ ಗಮನಕ್ಕೆ ತಂದು ಅಭ್ಯರ್ಥಿಗಳಿಗೆ ದಿನಾಂಕ: 01.06.2021ರ ನಂತರ ನೇಮಕಾತಿ ಅದೇಶ ನೀಡಲು ಸಹ ಸಹಮತಿಸಿದೆ ಎಂದು ತಿಳಿಸಿದೆ.

Ekroop Caur

(ಡಾ. ಏಕ್‌ರೂಪ್ ಕೌರ್)
ಸರ್ಕಾರದ ಕಾರ್ಯದರ್ಶಿ(ಆ&ಸಂ)
ಆರ್ಥಿಕ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು (1) & (2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಬೆಂಗಳೂರು.

3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
4. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು
5. ಮಾನ್ಯ ಉಪಮುಖ್ಯಮಂತ್ರಿಗಳು /ಮಾನ್ಯ ಸಚಿವರುಗಳ ಆಪ್ತ ಕಾರ್ಯದರ್ಶಿಗಳು.
6. ಎಲ್ಲಾ ಇಲಾಖಾ ಮುಖ್ಯಸ್ಥರು.
7. ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
8. ಎಲ್ಲಾ ನಿಗಮ/ಮಂಡಳಿಗಳ ಮುಖ್ಯಸ್ಥರು.
9. ಆರ್ಥಿಕ ಇಲಾಖೆಯ ವಿಶೇಷ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು/ವಿಶೇಷಾಧಿಕಾರಿಗಳು/ಶಾಖಾಧಿಕಾರಿಗಳು
10. ಹೆಚ್ಚುವರಿ ಪ್ರತಿಗಳು.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲ ತಾಣ www.finance.karnataka.gov.in ವೀಕ್ಷಿಸಿ.**